# Akashvani : Bangalore
# Regional Bulletin In Kannada
# 04.07.2026 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಂಗಳೂರಿನಲ್ಲಿ ಎಲೆಕ್ಟ್ರಿಕ್ ವಾಹನೋದ್ಯಮಿಗಳೊಂದಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸಭೆ ; ಕೇಂದ್ರದಿಂದ ಸಂಪೂರ್ಣ ಬೆಂಬಲ ಘೋಷಣೆ

೨. ಎಲೆಕ್ಟ್ರಿಕ್ ಬಸ್‌ಗಳ ಕಾರ್ಯಾಚರಣೆ ಮತ್ತು ಕಾರ್ಯಕ್ಷಮತೆ ಬಗ್ಗೆ ಅಧ್ಯಯನ ನಡೆಸಲು ಅಧಿಕಾರಿಗಳಿಗೆ ಸಚಿವ ಬೈರತಿ ಸುರೇಶ್ ಸೂಚನೆ

೩. ದೇಶದಲ್ಲಿ ಸಾಂವಿಧಾನಿಕ ಸಮಾನತೆಯ ಜಾರಿ ಕುರಿತಂತೆ ವಿಶ್ಲೇಷಣೆಯ ಅಗತ್ಯವಿದೆ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್

೪. ಕನಿಷ್ಠ ವೇತನದ ಅಂತಿಮ ಅಧಿಸೂಚನೆ ಮರುಪರಿಶೀಲನೆ ಮಾಡದಂತೆ, ಕಾರ್ಮಿಕ ಸಂಘಟನೆಗಳ ಒಕ್ಕೂಟದಿಂದ ಮುಖ್ಯಮಂತ್ರಿಗೆ ಮನವಿ

೫. ಮಳೆ ಕೊರತೆ ಹಿನ್ನೆಲೆ ; ಮಂಡ್ಯದಲ್ಲಿ ಕೆಆರ್‌ಎಸ್ ಜಲಾಶಯಕ್ಕೆ ಬಿಜೆಪಿ ನಿಯೋಗ ಭೇಟಿ

<><*<><>*><>

ಬೆಂಗಳೂರಿನ ಹೆಚ್.ಎಂ.ಟಿ. ಭವನದಲ್ಲಿಂದು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಎಲೆಕ್ಟ್ರಿಕ್ ವಾಹನ ಉದ್ಯಮದ ಪ್ರಮುಖರ ಜೊತೆ ಸಭೆ ನಡೆಸಿದರು. ಸಭೆಯಲ್ಲಿ ದೇಶೀಯ ಉತ್ಪಾದನೆಯನ್ನು ವೃದ್ಧಿಸುವ ಮತ್ತು ದೇಶೀಯ ಹಾಗೂ ಜಾಗತಿಕ ಮಾರುಕಟ್ಟೆಯಲ್ಲಿ ಭಾರತದಲ್ಲಿ ತಯಾರಾಗುವ ಎಲೆಕ್ಟ್ರಿಕ್ ವಾಹನಗಳಿಗೆ ಹೆಚ್ಚಿನ ಬೇಡಿಕೆ ಸೃಷ್ಟಿಸುವ ಅವಕಾಶಗಳ ಕುರಿತು ಸಮಾಲೋಚನೆ ನಡೆಸಿದರು. ದ್ವಿಚಕ್ರ ವಾಹನಗಳ ತಯಾರಿಕೆ ಹಾಗೂ ಇವಿ ವಲಯದ ವಿವಿಧ ಉತ್ಪನ್ನಗಳ ತಯಾರಿಕೆಗೆ ಅಗತ್ಯವಾದ ಪೂರಕ ವ್ಯವಸ್ಥೆ ಬಲಪಡಿಸುವ ನಿಟ್ಟಿನಲ್ಲಿ ಚರ್ಚೆ ನಡೆಸಿದರು. ಈ ಕುರಿತಂತೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಹೆಚ್.ಡಿ.ಕುಮಾರಸ್ವಾಮಿ, ದೇಶದಲ್ಲಿ ದೃಢವಾದ ನಾವೀನ್ಯತೆಯಿಂದ ಕೂಡಿದ ಜಾಗತಿಕ ಗುಣಮಟ್ಟದ ಸ್ಪರ್ಧಾತ್ಮಕ ಇವಿ ಪೂರಕ ವ್ಯವಸ್ಥೆಯನ್ನು ನಿರ್ಮಿಸುವುದಕ್ಕೆ ಕೇಂದ್ರ ಸರ್ಕಾರದಿಂದ ಸಂಪೂರ್ಣ ಬೆಂಬಲ ನೀಡುವುದಾಗಿ ಘೋಷಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಎಲೆಕ್ಟ್ರಿಕ್ ಬಸ್‌ಗಳ ಕಾರ್ಯಚರಣೆ ಮತ್ತು ಅವುಗಳ ಕಾರ್ಯಕ್ಷಮತೆ ಬಗ್ಗೆ ಅಧ್ಯಯನ ನಡೆಸುವಂತೆ ಸಾರಿಗೆ ಇಲಾಖೆ ಕಾರ್ಯದರ್ಶಿಗಳಿಗೆ ಸೂಚನೆ ನೀಡಿರುವುದಾಗಿ ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಬೆಂಗಳೂರಿನ ಕೆ.ಆರ್.ವೃತ್ತದಲ್ಲಿ ನಡೆದ ಅಪಘಾತದಲ್ಲಿ ಗಾಯಗೊಂಡವರನ್ನು ಖಾಸಗಿ ಆಸ್ಪತ್ರೆಯಲ್ಲಿ ಭೇಟಿ ಮಾಡಿ ಮಾತನಾಡಿದ ಅವರು, ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ ಎಂದು ಹೇಳಿದ್ದಾರೆ. ಬಸ್‌ಗಳ ಸ್ಥಿತಿಗತಿಗಳನ್ನು ಪರಿಶೀಲಿಸಿದ ನಂತರವೇ ನೂತನ ಎಲೆಕ್ಟ್ರಿಕ್ ಬಸ್‌ಗಳ ಸಂಚಾರದ ಬಗ್ಗೆ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಸಂವಿಧಾನದ ಪೂರ್ವಪೀಠಿಕೆಯಲ್ಲಿ ಸಮಾನತೆಗೆ ಮಹತ್ವ ನೀಡಲಾಗಿದ್ದರೂ, ಕಾನೂನು ಮತ್ತು ಸಮಾಜದ ದೃಷ್ಟಿಯಲ್ಲಿ ಎಷ್ಟರ ಮಟ್ಟಿಗೆ ಜಾರಿಯಾಗಿದೆ ಎಂಬ ಬಗ್ಗೆ ಗಂಭೀರ ವಿಶ್ಲೇಷಣೆ ಅಗತ್ಯವಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನ ಖಾಸಗಿ ಕಾನೂನು ಮಹಾವಿದ್ಯಾಲಯದಲ್ಲಿ ನಡೆದ ಪದವಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಕಾನೂನು ಪದವೀಧರರು ನಿರಂತರ ಅಧ್ಯಯನದ ಮೂಲಕ ಪರಿಣತ ನ್ಯಾಯವಾದಿಗಳಾಗಿ ಬೆಳೆಯಬೇಕು ಎಂದು ಸಲಹೆ ನೀಡಿದ್ದಾರೆ. ದೇಶದಲ್ಲಿ ೧ ಸಾವಿರದ ೫೦೦ಕ್ಕೂ ಹೆಚ್ಚು ಕಾನೂನು ಕಾಲೇಜುಗಳಿದ್ದು, ಪ್ರತಿವರ್ಷ ಸಾವಿರಾರು ಕಾನೂನು ಪದವೀಧರರು ಹೊರಬರುತ್ತಿದ್ದಾರೆ. ಆದರೂ ನ್ಯಾಯಾಲಯಗಳಲ್ಲಿ ಸಾವಿರಾರು ಪ್ರಕರಣಗಳು ಬಾಕಿ ಉಳಿದಿರುವುದು ಕಳವಳಕಾರಿ ಎಂದು ತಿಳಿಸಿದ್ದಾರೆ. ಪ್ರಕರಣಗಳ ತ್ವರಿತ ವಿಲೇವಾರಿಗೆ ನ್ಯಾಯಾಂಗದಲ್ಲಿ ಇನ್ನಷ್ಟು ಸುಧಾರಣೆ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ರಾಜ್ಯದಲ್ಲಿ ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಮರು ಪರಿಶೀಲಿಸಬಾರದು ಎಂದು ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಿದೆ. ಸಿಐಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ವರಲಕ್ಷ್ಮಿ ಅವರ ನೇತೃತ್ವದ ನಿಯೋಗ ಮುಖ್ಯಮಂತ್ರಿ ಅವರನ್ನು ಗೃಹಕಚೇರಿ ಕೃಷ್ಣಾದಲ್ಲಿ ಭೇಟಿಯಾಗಿ ಚರ್ಚೆ ನಡೆಸಿತು. ಸಚಿವ ಸಂಪುಟದಲ್ಲಿ ಕನಿಷ್ಠ ವೇತನ ಪರಿಷ್ಕರಣೆ ನಡೆಸಲು

ಮುಂದಾಗಿರುವುದು ಆಘಾತ ಉಂಟು ಮಾಡಿದೆ. ಕನಿಷ್ಠ ವೇತನದ ಅಂತಿಮ ಅಧಿಸೂಚನೆಯನ್ನು ಮರುಪರಿಶೀಲಿಸುವ ಅಥವಾ ಹಿಂಪಡೆಯುವ ಯಾವುದೇ ಕ್ರಮವನ್ನು ನಿಲ್ಲಿಸಬೇಕು. ಸರ್ಕಾರ ಕಾರ್ಮಿಕರ ಪರವಾಗಿ ನಿಲ್ಲಬೇಕು ಎಂದು ಮನವಿ ಪತ್ರದಲ್ಲಿ ಕೋರಲಾಗಿದೆ.

**<><*<><>*><>**

ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆ ವಿಶ್ವಾಸಾರ್ಹತೆ ಹೊಂದಿಲ್ಲ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೂವರೆಗೆ ನಡಸಲಾದ ಸಂಪೂರ್ಣ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ. ಈ ಕುರಿತಂತೆ ಇದೇ ೭ರಂದು ದೆಹಲಿಗೆ ತೆರಳಿ, ಕೇಂದ್ರ ಚುನಾವಣಾ ಆಯೋಗಕ್ಕೆ ದೂರು ನೀಡುವುದಾಗಿ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ತಲೆದೋರಿರುವ ಮಳೆ ಕೊರತೆ ಹಾಗೂ ನೀರಿನ ಅಭಾವದ ಹಿನ್ನೆಲೆಯಲ್ಲಿ ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ನೇತೃತ್ವದ ಬಿಜೆಪಿ ನಿಯೋಗ ಇಂದು ಮಂಡ್ಯ ಜಿಲ್ಲೆಯ ಶ್ರೀರಂಗ ಪಟ್ಟಣ ತಾಲೂಕಿನ ಕೆ.ಆರ್.ಎಸ್. ಜಲಾಶಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಕೆಆರ್‌ಎಸ್ ಅಣೆಕಟ್ಟೆಯ ನೀರಿನ ಮಟ್ಟ ತೀವ್ರವಾಗಿ ಕುಸಿದಿದ್ದು, ೮೦ ಅಡಿಗೆ ತಲುಪಿದೆ. ಆದರೂ ರಾಜ್ಯ ಸರ್ಕಾರ ಯಾವುದೇ ಕ್ರಮವಹಿಸಿಲ್ಲ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೂಡಲೇ ಸರ್ಕಾರ ಎಕರೆಗೆ ೫೦ ಸಾವಿರ ರೂಪಾಯಿ ಪರಿಹಾರ ನೀಡಲು ಕ್ರಮವಹಿಸಬೇಕು ಎಂದು ಆಗ್ರಹಿಸಿದ್ದಾರೆ. ಇಂತಹ ಕಠಿಣ ಪರಿಸ್ಥಿತಿಯಲ್ಲಿ ಸರ್ಕಾರ ರೈತರು ಹಾಗೂ ಸರ್ವಪಕ್ಷಗಳ ಸಭೆ ಕರೆಯುವಂತೆ ಒತ್ತಾಯಿಸಿದ್ದಾರೆ.

**<><*<><>*><>**

ಕಳೆದ ಮೂರ್‍ನಾಲ್ಕು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಬೆಳಗಾವಿ ಜಿಲ್ಲೆಯಲ್ಲಿ ಉಂಟಾಗಿದ್ದ ಬರದ ಆತಂಕ ಸದ್ಯಕ್ಕೆ ನಿವಾರಣೆ ಆಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಪ್ರಕೃತಿ ವಿಕೋಪ ನಿರ್ವಹಣಾ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲೂ ವ್ಯಾಪಕವಾಗಿ ಮಳೆಯಾಗುತ್ತಿರುವುದರಿಂದ ಮತ್ತು ಘಟ್ಟ ಪ್ರದೇಶದಲ್ಲೂ ನಿರಂತರ ಮಳೆ ಮುಂದುವರೆದಿದ್ದರಿಂದ ಜಿಲ್ಲೆಯ ಕೃಷ್ಣಾ ನದಿ ಸೇರಿದಂತೆ ಮಲಪ್ರಭಾ, ಘಟಪ್ರಭಾ, ಹಿರಣ್ಯಕೇಶಿ, ಮಾರ್ಕಂಡೆಯ ನದಿಗಳಿಗೆ ನೀರಿನ ಹರಿವು ಹೆಚ್ಚಾಗಿದೆ ಎಂದು ತಿಳಿಸಿದ್ದಾರೆ. ಇನ್ನೂ ನಾಲ್ಕೈದು ದಿನ ಇದೇ ರೀತಿ ಮಳೆ ಮುಂದುವರೆದರೆ ರೈತರು ಯಾವುದೇ ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ. ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದಿದ್ದರೆ ಮೋಡ ಬಿತ್ತನೆ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಪ್ರತಿಯೊಬ್ಬ ವಿದ್ಯಾರ್ಥಿಯ ಸಾಧನೆ ತರಗತಿಯ ಕೋಣೆಯಿಂದಲೇ ಆರಂಭವಾಗುವುದು ಎಂದು ಗಗನಯಾತ್ರಿ ಶುಭಾಂಶು ಶುಕ್ಲ ತಿಳಿಸಿದ್ದಾರೆ. ಬೆಂಗಳೂರಿನ ನೆಹರು ತಾರಾಲಯದಲ್ಲಿ ಇಂದು ತಮ್ಮ 'ದ ಸೆಕೆಂಡ್ ಆರ್ಬಿಟ್' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ನಮ್ಮದೇ ಬಾಹ್ಯಾಕಾಶ ನೌಕೆ, ಭಾರತದ ಮಣ್ಣಿನಿಂದಲೇ ಮಿಷನ್ ಗಗನಯಾನ ಆರಂಭವಾಗಲಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ಗಗನಯಾತ್ರಿ ಪ್ರಶಾಂತ್ ಬಿ. ನಾಯರ್ ಮಾತನಾಡಿ, ಶುಭಾಂಶು ಶುಕ್ಲ ಅವರು ಈ ಪುಸ್ತಕದಲ್ಲಿ ಇಡೀ ಭೂಮಿಯನ್ನು ಪ್ರತಿನಿಧಿಸಿ ಉಲ್ಲೇಖಿಸಿದ್ದಾರೆ ಎಂದು ಹೇಳಿದರು.

**<><*<><>*><>**

ರಾಮನಗರ ಜಿಲ್ಲೆಯ ೪೬ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ಅಲ್ಲಿ ಟ್ಯಾಂಕರ್ ಮತ್ತು ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮಂಜುನಾಥ್ ಜೆ. ತಿಳಿಸಿದ್ದಾರೆ. ಜಿಲ್ಲೆಯ ಬರ ಪರಿಸ್ಥಿತಿ ಕುರಿತು ಆಯೋಜಿಸಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಸಮಸ್ಯೆ ಮತ್ತಷ್ಟು ಉಲ್ಬಣವಾಗದಂತೆ ಮುಂಜಾಗ್ರತಾ ಕ್ರಮಗಳನ್ನು  ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕುಡಿಯುವ ನೀರಿನ ಪೂರೈಕೆಯಲ್ಲಿನ ಮಾನದಂಡಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧.   ಯಾದಗಿರಿ ಜಿಲ್ಲೆಯಲ್ಲಿನ ಮಳೆ ಕೊರತೆಯ ಹಿನ್ನೆಲೆಯಲ್ಲಿ ರೈತರು ಬೆಳೆ ನಷ್ಟದಿಂದ ಸಂಕಷ್ಟಕ್ಕೆ ಸಿಲುಕದಂತೆ ನಿಗದಿತ ಬೆಳೆಗಳಿಗೆ ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸುವ ಕುರಿತು ರೈತರಿಗೆ ಅರಿವು ಮೂಡಿಸುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<><>*><>**

ರಾಜ್ಯದ ಹಲವೆಡೆ ಮುಂದಿನ ೭ ದಿನ ಗುಡುಗು-ಸಿಡಿಲು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಕೇಂದ್ರ ನೀಡಿದ ಮಾಹಿತಿ ಪ್ರಕಾರ ಕರಾವಳಿ ಜಿಲ್ಲೆಗಳಲ್ಲಿ ಇದೇ ೭ರವರೆಗೆ ಮತ್ತು ದಕ್ಷಿಣ ಒಳನಾಡು ಮಲೆನಾಡು ಜಿಲ್ಲೆಗಳಲ್ಲಿ ಇದೇ ೫ರಿಂದ ೭ವರೆಗೆ ಗುಡುಗು-ಸಿಡಿಲು ಹಾಗೂ ಗಾಳಿಯೊಂದಿಗೆ ಮಳೆಯಾಗಲಿದೆ ಎಂದು ತಿಳಿಸಿದೆ. ಕಳೆದ ೨೪ ಗಂಟೆಗಳಲ್ಲಿ ಕರಾವಳಿ ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗಿರುವ ಬಗ್ಗೆ ವರದಿಯಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೪೫ ಕ್ಕೆ <>*><>**